ಕರ್ನಾಟಕ ಸರ್ಕಾರ

ಸಂಖ್ಯೆ:ಪಮೂಶಿ/ಶೈಶಾ/ ವಾ.ಶೈ.ಚ/2021-22

ನಿರ್ದೇಶಕರ ಕಛೇರಿ.
ಪದವಿ ಪೂರ್ವ ಶಿಕ್ಷಣ ಇಲಾಖೆ
ಸಂಪಿಗೆ ರಸ್ತೆ. 18ನೇ ಕ್ರಾಸ್
ಮಲ್ಲೇಶ್ವರಂ. ಬೆಂಗಳೂರು-12
ದಿನಾಂಕ: 05-07-2021.

**ಸುತ್ತೋಲೆ**

ವಿಷಯ: ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರು ಕಾಲೇಜುಗಳಿಗೆ ಹಾಜರಾಗುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಪ.ಪೂ.ಶಿ/ಶೈಶಾ/ವಾ.ಶೈ.ಚ/2021-22 ದಿನಾಂಕ: 15/06/2021.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸುತ್ತೋಲೆಯಲ್ಲಿ 2021-22ನೇ ಸಾಲಿನ ಶೈಕ್ಷಣಿಕ ಚಟುವಟಿಕೆಗಳ ತಾತ್ಕಾಲಿಕ ವೇಳಾ ಪಟ್ಟಿಯನ್ನು ಪ್ರಕಟಿಸಲಾಗಿತ್ತು. ಅದರಂತೆ ದ್ವಿತೀಯ ಪಿಯುಸಿ ಪ್ರವೇಶ ಪ್ರಕ್ರಿಯೆ ಪ್ರಾರಂಭದ ಜೊತೆಗೆ ವಿದ್ಯಾರ್ಥಿಗಳಿಗೆ ಆನ್‌ಲೈನ್ ತರಗತಿಗಳನ್ನು ಪ್ರಾರಂಭಿಸಬೇಕಾಗಿದೆ.

ಇದರ ಪ್ರಯುಕ್ತ ಉಪನ್ಯಾಸಕರು ಕಾಲೇಜು ಪ್ರಾರಂಭಕ್ಕೆ ಮುನ್ನ ಪೂರ್ವ ಸಿದ್ಧತೆ ಮಾಡಿಕೊಳ್ಳಲು ಅಂದರೆ ತಮ್ಮ ವಿಷಯದ ವಿದ್ಯಾರ್ಥಿಗಳ ಸಂಪರ್ಕ ಸಂಖ್ಯೆಗಳನ್ನು(ವಾಟ್ಸ್‌ಆಪ್) ಕಡ್ಡಾಯವಾಗಿ ಸಂಗ್ರಹಿಸುವುದು ಹಾಗೂ ವಿದ್ಯಾರ್ಥಿಗಳ ಪ್ರವೇಶ ಪ್ರಕಿಯೆ ಸುಗಮಗೊಳಿಸಲು ಕಾಲೇಜಿನ ಮುಖ್ಯಸ್ಥರಾದ ಪ್ರಾಚಾರ್ಯರಿಗೆ ನೆರವಾಗಲು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳು ದಿನಾಂಕ: 07/07/2021ರಿಂದ ಕಾಲೇಜುಗಳಿಗೆ ಕಡ್ಡಾಯವಾಗಿ ಹಾಜರಾಗಲು ಸೂಚಿಸಿದೆ.

Snehal

ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಸಹಾಯಕ ನಿರ್ದೇಶಕರು, ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ಬೆಂಗಳೂರು ಇವರಿಗೆ ಜಿಲ್ಲಾ ಉಪ ನಿರ್ದೇಶಕರುಗಳ ಇ-ಮೇಲ್‌ಗೆ ಅಳವಡಿಸಲು.
3. ಕಛೇರಿ ಪ್ರತಿ.